# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಎಸ್.ಅರುಣ್ ರವರ ನಿಯಮ 72ರ ಮೇರೆಗೆ ಗಮನ ಸೆಳೆಯುವ ಸೂಚನೆಗೆ ಉತ್ತರ

*************

**ವಿಷಯ:**

ಬೆಂಗಳೂರಿನ ವಿಧಾನ ಸೌಧ, ವಿಕಾಸ ಸೌಧ ಹಾಗೂ ಬಹುಮಹಡಿ ಕಟ್ಟಡ ಸುತ್ತಮುತ್ತ ಹಲವಾರು ಅನಧಿಕೃತ ಆಹಾರ ಮಳಿಗೆಗಳು ವ್ಯಾಪಾರ ನಡೆಸುತ್ತಿರುವ ಬಗ್ಗೆ, ಮತ್ತು ಈ ಆಹಾರ ಮಳಿಗೆಗಳ ಉತ್ಪನ್ನಗಳು ಕಲುಶಿತಗೊಂಡು ಸಾರ್ವಜನಿಕರ ಆರೋಗ್ಯ ಹದಗೆಡುತ್ತಿರುವ ಬಗ್ಗೆ.

**ಉತ್ತರ:**

ಬೆಂಗಳೂರಿನ ವಿಧಾನಸೌಧ, ವಿಕಾಸಸೌಧ ಹಾಗೂ ಬಹುಮಹಡಿ ಕಟ್ಟಡಗಳ ಸುತ್ತಮುತ್ತ ಒಟ್ಟು 17 ಬೀದಿ ಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿಯನ್ನು ನೀಡಲು ಗುರುತಿಸಲಾಗಿದೆ. ರಿಟ್ ಪಿಟಿಷನ್ ಸಂಖ್ಯೆ:5264/2026 (LB-RES) ರಲ್ಲಿ ಬೀದಿ ವ್ಯಾಪಾರಿಗಳ ಗುರುತಿನ ಚೀಟಿಯಲ್ಲಿ ಲೋಪದೋಷವಿದ್ದು ಗುರುತಿನ ಚೀಟಿಗಳನ್ನು ಮರು ಮುದ್ರಿಸಿ ವಿತರಿಸಬೇಕೆಂದು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದೆ. ಈ ಸಂಬಂಧ ಗುರುತಿನ ಚೀಟಿಯನ್ನು ಮುದ್ರಿಸಿ ವಿತರಿಸಲು ಗ್ರೇಟರ್ ಬೆಂಗಳೂರು ಪ್ರಾಧಿಕಾರದಿಂದ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಮುಂದುವರೆದು, ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ, ಬೆಂಗಳೂರು ವತಿಯಿಂದ 2024-25 ಮತ್ತು 2025-26ನೇ ಸಾಲುಗಳಲ್ಲಿ ವಿಧಾನ ಸೌಧ, ವಿಕಾಸಸೌಧ ಹಾಗೂ ಬಹುಮಹಡಿಗಳ ಕಟ್ಟಡ ಸುತ್ತಮುತ್ತಲಿನ ಒಟ್ಟು 43 ಬೀದಿ ಬದಿ ಆಹಾರ ಮಳಿಗೆಗಳ ತಪಾಸಣೆ ಕೈಗೊಂಡು, 06 ಆಹಾರ ಮಾದರಿಯನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, ಸದರಿ ಫಲಿತಾಂಶವು ಸುರಕ್ಷಿತ ಎಂದು ವರದಿಯಾಗಿರುತ್ತದೆ. ಅಲ್ಲದೆ ಸದರಿ ಆಹಾರ ಮಾರಾಟಗಾರರಿಗೆ ಆಹಾರ ಶುಚಿತ್ವ, ಕುಡಿಯುವ ನೀರಿನ ಗುಣಮಟ್ಟ, ವೈಯಕ್ತಿಕ ಸ್ವಚ್ಛತೆ ಮತ್ತು ಆಹಾರ ತಯಾರಿಸುವ ಉತ್ಪನ್ನಗಳ ಗುಣಮಟ್ಟದ ಕುರಿತು ತರಬೇತಿಯನ್ನು ನೀಡಲಾಗಿರುತ್ತದೆ. ಸಂಚಾರಿ ಆಹಾರ ಪ್ರಯೋಗಾಲಯದೊಂದಿಗೆ ಸದರಿ ಸ್ಥಳಗಳಿಗೆ ಭೇಟಿ ನೀಡಿ ಅಲ್ಲಿನ 14 ಆಹಾರ ಮಾದರಿಗಳನ್ನು ಸಂಗ್ರಹಿಸಿ ಸ್ಥಳದಲ್ಲೇ ಪ್ರತ್ಯೇಕತೆ ಮುಖಾಂತರ ಪರೀಕ್ಷಿಸಿ ಅರಿವು ಮೂಡಿಸಲಾಗಿರುತ್ತದೆ ಹಾಗೂ ಕಾಲಕಾಲಕ್ಕೆ ತಪಾಸಣೆಯನ್ನು ಕೈಗೊಳ್ಳುವ ಮುಖಾಂತರ ಆಹಾರ ಉದ್ದಿಮೆದಾರರಿಗೆ ಹಾಗೂ ಸಾರ್ವಜನಿಕರಿಗೆ ಅರಿವು ಮೂಡಿಸಲಾಗಿರುತ್ತದೆ. ಈಗಾಗಲೇ ನಿಯಮಿತವಾಗಿ ತಪಾಸಣೆ ನಡೆಸಲಾಗುತ್ತಿದ್ದು, ತಪ್ಪಿತಸ್ಥರು ಎಂದು ಕಂಡು ಬಂದಲ್ಲಿ ಕಾನೂನು ಪ್ರಕಾರ ಕ್ರಮವಹಿಸಲಾಗುತ್ತಿದೆ.

**ನಅಇ 62 ಬಿಬಿಎಲ್ 2026**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ